(47)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಸಿ.ಎನ್. ಮಂಜೇಗೌಡ ಇವರು ನಿಯಮ 72 ರಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆ ಸಂಖ್ಯೆ: 47 ಕ್ಕೆ ಮಾನ್ಯ ಇಂಧನ ಸಚಿವರ ಉತ್ತರ**

**ವಿಷಯ:** ಕೃಷಿ ಪಂಪ್‌ಸೆಟ್‌ಗಳಿಗೆ ಟ್ರಾನ್ಸ್‌ಫಾರ್ಮರ್ ಸಮೇತ ಉಚಿತವಾಗಿ ಮೂಲಸೌಕರ್ಯ ಒದಗಿಸುವ ಯೋಜನೆಗೆ ರಾಜ್ಯ ಸರ್ಕಾರ ಕೊಕ್ ಕೊಟ್ಟಿದ್ದು, ಇನ್ನೂ ಮುಂದೆ ಕೃಷಿ ಕೊಳವೆ ಬಾವಿಗಳ ವಿದ್ಯುತ್ ಸಂಪರ್ಕದ ಖರ್ಚು ವೆಚ್ಚವು ರೈತರ ಕೈ ಸುಡುಲಿದೆ. ಕಳೆದ ಸೆ.22ರ ನಂತರ ನೋಂದಣಿಯಾಗುವ ಕೃಷಿ ಕೊಳವೆ ಬಾವಿಗಳಿಗೆ ರೈತರು ಸ್ವಂತ ಖರ್ಚಿನಲ್ಲಿ ವಿದ್ಯುತ್ ಸಂಪರ್ಕ ಪಡೆಯಬೇಕೆಂದು ಸರ್ಕಾರ ಆದೇಶ ಹೊರಡಿಸಿದೆ. ಈ ಆದೇಶವು ರೈತಾಪಿ ವರ್ಗಕ್ಕೆ ಆರ್ಥಿಕವಾಗಿ ದೊಡ್ಡ ಪೆಟ್ಟು ಕೊಟ್ಟಿದ್ದು. ಹೊಸದಾಗಿ ಕೊಳವೆ ಬಾವಿ ಕೊರೆಸುವ ರೈತರು ವಿದ್ಯುತ್ ಸಂಪರ್ಕಕ್ಕಾಗಿ ಲಕ್ಷಾಂತರ ರೂಪಾಯಿ ಖರ್ಚು ಮಾಡಬೇಕಾಗಿದೆ. ಈ ವಿಷಯವು ರೈತರ ಹಿತದೃಷ್ಟಿಯಿಂದ ಮಾನ್ಯ ಇಂಧನ ಸಚಿವರ ಗಮನ ಸೆಳೆದಿರುವ ಬಗ್ಗೆ.

* * * * *

**ಉತ್ತರ**:- ಸರ್ಕಾರದ ಆದೇಶ ಸಂಖ್ಯೆ:ಎನರ್ಜಿ/ವಿಎಸ್‌ಸಿ/214/2023 ದಿನಾಂಕ: 07.10.2023 ರ ಆದೇಶದನ್ವಯ ರಾಜ್ಯದಲ್ಲಿರುವ ನೀರಾವರಿ ಪಂಪ್‌ಸೆಟ್‌ಗಳನ್ನು ವಿದ್ಯುತ್ ಜಾಲಕ್ಕೆ ವ್ಯವಸ್ಥಿತವಾಗಿ ಸೇರ್ಪಡೆಗೊಳಿಸಲು ಮತ್ತು ಸೌರ ವಿದ್ಯುತ್ತನ್ನು ಸಮರ್ಪಕವಾಗಿ ಬಳಸಲು stand-alone/off grid ಸೋಲಾರ್ ಪಂಪ್‌ಸೆಟ್‌ಗಳನ್ನು ಹಾಗೂ IP set ಫೀಡರ್‌ಗಳ ಸೌರೀಕರಣವನ್ನು ಅನುಷ್ಠಾನಗೊಳಿಸಿ ರೈತರ ಪಂಪ್‌ಸೆಟ್‌ಗಳಿಗೆ ಹಗಲಿನ ವೇಳೆ ವಿದ್ಯುತ್ ಸೌಕರ್ಯವನ್ನು ಕಲ್ಪಿಸಲು ಆದೇಶಿಸಿರುತ್ತದೆ.

ದಿನಾಂಕ:22.09.2023ರೊಳಗಡೆ ನೊಂದಾಯಿಸಲ್ಪಟ್ಟ ಅರ್ಜಿಗಳಲ್ಲಿ ವಿದ್ಯುತ್ ಮಾರ್ಗದಿಂದ 500 ಮೀಟರ್ ಒಳಗಡೆ ಇರುವ IP ಸೆಟ್‌ಗಳಿಗೆ ಸರ್ಕಾರದಿಂದ ಮೂಲಭೂತ ಸೌಕರ್ಯ ಒದಗಿಸಲು ತೀರ್ಮಾನಿಸಲಾಗಿದೆ.

ಮುಂದುವರೆದು, ದಿನಾಂಕ:22.09.2023 ರಿಂದ ನಂತರ ನೊಂದಾಯಿಸಲ್ಪಡುವ IP ಸೆಟ್‌ಗಳಿಗೆ ಮೂಲ ಭೂತ ಸೌಕರ್ಯವನ್ನು ರೈತರು ಸ್ವಯಂ ಕಾರ್ಯನಿರ್ವಹಣೆಯಡಿ (self-Execution) ರಚಿಸಿಕೊಳ್ಳಲು ಆದೇಶಿಸಿದ್ದು, ಇದನ್ನು ಮಾರ್ಪಡಿಸುವ ಬಗ್ಗೆ ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ.

ಸಂಖ್ಯೆ: ಎನರ್ಜಿ 286 ಇಬಿಎಸ್ 2023

5/12/23
(ಕೆ.ಜೆ.ಜಾರ್ಜ್)
ಇಂಧನ ಸಚಿವರು